ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು):-

ಅ) ಇಲ್ಲ.

ಆ) ಈ ಬಗ್ಗೆ ಪರೀಶೀಲಿಸಲಾಗುವುದು.

ವಿಷಯ:- ರಾಜ್ಯದಲ್ಲಿರುವ ಗ್ರಾಮ ಸಹಾಯಕರ ಸೇವೆಯನ್ನು ಖಾಯಂಗೊಳಿಸುವುದು.

1481 (2277) ಶ್ರೀ ವೈ. ರಾಮಕೃಷ್ಣ (ಅನೇಕಲ್):- ಮಾನ್ಯ ಕಂದಾಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿರುವ ಗ್ರಾಮ ಸಹಾಯಕರ ಹುದ್ದೆಗಳೆಷ್ಟು?

ಆ) ಗ್ರಾಮ ಸಹಾಯಕರು ಎಷ್ಟು ವರ್ಷಗಳಿಂದ ಸರ್ಕಾರದ ಸೇವೆಯಲ್ಲಿರುವವರು?

ಇ) ಗ್ರಾಮ ಸಹಾಯಕರ ಸೇವೆಯನ್ನು ಖಾಯಂಗೊಳಿಸದೇ ಇರಲು ಕಾರಣವೇನು?

ಈ) ಗ್ರಾಮ ಸಹಾಯಕರ ಸೇವೆಯನ್ನು ಖಾಯಂ ಗೊಳಿಸುವ ಬಗ್ಗೆ ಜಿಲ್ಲಾಧಿಕಾರಿಗಳಿಂದ ವರದಿ ಪಡೆದು ಸರಕಾರವು ನೇಮಿಸಿದ ಅಧ್ಯಯನ ಸಮಿತಿ ವರದಿ ಸಲ್ಲಿಸಿದೆಯೇ? ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ?

ಶ್ರೀ ರಮೇಶ್ ಸಿ. ಜಿಗಜಿಣಗಿ (ಕಂದಾಯ ಸಚಿವರು):-

ಅ) 10450

ಆ) 18 ವರ್ಷಗಳಿಂದ

ಇ) ಗ್ರಾಮ ಸಹಾಯಕರುಗಳು ಮಿತವೇತನ ಹುದ್ದೆಗಳ ಮೇರೆಗೆ ಕೆಲಸ ನಿರ್ವಹಿಸುತ್ತಿದ್ದಾರೆ. ಇವರುಗಳು 65 ವರ್ಷಗಳವರೆಗೆ ಕರ್ತವ್ಯ ನಿರ್ವಹಿಸಲು ಅವಕಾಶವಿರುವುದರಿಂದ ಹಾಗೂ ವ್ಯಂದ ಮತ್ತು ನೇಮಕಾತಿ ನಿಯಮಗಳನ್ವಯ ನೇಮಕಾತಿ ಮಾಡದೇ ಇರುವುದರಿಂದ ಇವರುಗಳನ್ನು ಖಾಯಂ ಆಗಿ ಗ್ರೂಪ್–ಡಿ ನೌಕರರೆಂದು ಪರಿಗಣಿಸಲು ಸಾಧ್ಯವಾಗುತ್ತಿಲ್ಲ.

ಈ) ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಸದ್ಯದ ಪರಿಸ್ಥಿತಿಯಲ್ಲಿ ಅವರುಗಳನ್ನು ಯಥಾ ಸ್ಥಿತಿಯಲ್ಲಿ ಮುಂದುವರಿಸಲು ತೀರ್ಮಾನಿಸಲಾಯಿತು. ನಂತರ, ಅಧ್ಯಕ್ಷರು, ಕರ್ನಾಟಕ ರಾಜ್ಯ ಕಂದಾಯ ಇಲಾಖೆ ಗ್ರಾಮ ಸಹಾಯಕರ ಸಂಘ(ರಿ) ರವರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಖಾಯಂ-ಗೊಳಿಸುವ ಬಗ್ಗೆ ರಿಟ್ ಅರ್ಜಿ ಸಂ: 29424:94 ರನ್ನು ಸಲ್ಲಿಸಿದ್ದು ಸದರಿ ರಿಟ್ ಅರ್ಜಿಯ ಇತ್ಯರ್ಥ ಕ್ಕಾಗಿ ಬಾಕಿ ಉಳಿದಿರುತ್ತದೆ.

ವಿಷಯ:- ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆ ಕಾರ್ಮಿಕರ ವೇತನ ಮತ್ತು ಭತ್ಯೆಗಳು.

1482 (2086) ಶ್ರೀ ಎಸ್.ಎ. ರವೀಂದ್ರನಾಥ್ (ಮಾಯಕೊಂಡ):- ಮಾನ್ಯ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆ, ದೊಡ್ಡಬಾತಿ, ಇಲ್ಲಿ 1994 ರಿಂದ ಕೆಲವರಿಗೆ ಸರ್ಕಾರಿ